ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಕಲಬುರಗಿ ಜಿಲ್ಲೆ ಅಫಜಲಪುರ ತಾಲ್ಲೂಕು ಹಸರಗುಂಡಗಿಯ ನೀರು ಸರಬರಾಜು ಬಗ್ಗೆ

ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

495(385) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆ ಅಫಜಲಪುರ ತಾಲ್ಲೂಕಿನ ಹಸರಗುಂಡಗಿ ಬಳಿ ಕೈಗೊಂಡ ಗ್ರಾಮೀಣ ನೀರು ಸರಬರಾಜು ಯೋಜನೆ ಕಾಮಗಾರಿ ಅರ್ಧಕ್ಕೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಫಜಲಪುರ ತಾಲ್ಲೂಕಿನ ಹಸರಗುಂಡಗಿ, ಕಿರುಸಾವಳಗಿ, ಸಿರಸಗಿ ಸೇರಿ ಏಳು ಹಳ್ಳಿಗಳಿಗೆ ಭೀಮಾ ನದಿಯಿಂದ ನೀರು ಪೂರೈಕೆಗೆ ಜಾಕ್‌ವೆಲ್ ನಿರ್ಮಿಸಿ ಶುದ್ಧೀಕರಣ ಘಟಕದ ಮೂಲಕ ನೀರು ಪೂರೈಕೆಗೆ 3 ಕೋಟಿ ವೆಚ್ಚದ ಕಾಮಗಾರಿಯು ಯಾವಾಗ ಪೂರ್ಣಗೊಳ್ಳಲಿದೆ ; (ವಿವರ ನೀಡುವುದು)

(ಇ) 3 ಕೋಟಿ ವೆಚ್ಚದ ಕಾಮಗಾರಿಯಲ್ಲಿ ಗುತ್ತಿಗೆದಾರರು ಈಗಾಗಲೇ 1.40 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿಸಿಕೊಂಡು ಕಾಮಗಾರಿಯನ್ನು ಅರ್ಧಕ್ಕೆ ಬಿಟ್ಟು ಹೋಗಿದ್ದು, ಸದರಿ ಕುಡಿಯುವ ನೀರಿನ ಯೋಜನೆಯನ್ನು ಪೂರ್ಣಗೊಳಿಸಲಾಗುವುದು ಯಾವಾಗ; ಕಾಮಗಾರಿಯನ್ನು ಅರ್ಧಕ್ಕೆ ಬಿಟ್ಟು ಹೋಗಿರುವ ಗುತ್ತಿಗೆದಾರರ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)